ಪ್ರ-72-155

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ, ಇವರು ನಿಯಮ 72ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ.

ವಿಷಯ:-

ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಮೂಲಭೂತ ಸೌಕರ್ಯಗಳು ಹಾಗೂ ಎದುರಿಸುತ್ತಿರುವ ಸಮಸ್ಯೆ ಖಾಲಿ ಹುದ್ದೆಗಳ ಭರ್ತಿ ಹಾಗೂ ವಿಶ್ವವಿದ್ಯಾಲಯದ ಸಮಗ್ರ ಅಭಿವೃದ್ಧಿಗೆ ಅಗತ್ಯವಾಗಿ ಬೇಕಾದಂತಹ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉಪ ಮುಖ್ಯಮಂತ್ರಿಗಳ(ಉನ್ನತ ಶಿಕ್ಷಣ) ಹೇಳಿಕೆ:

ಮಹಿಳೆಯರಿಗೆ ಉನ್ನತ ಶಿಕ್ಷಣ ಮತ್ತು ತರಬೇತಿ ನೀಡುವ ಮೂಲಕ ಮಹಿಳಾ ಸಬಲೀಕರಣ ಸಾಧಿಸುವ ಉದ್ದೇಶದಿಂದ 2003-04ರಲ್ಲಿ ಆರಂಭವಾದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯವು ರಾಜ್ಯದ ಏಕೈಕ ಮಹಿಳಾ ವಿಶ್ವವಿದ್ಯಾಲಯವಾಗಿದೆ. ಸದರಿ ವಿಶ್ವವಿದ್ಯಾಲಯವು 2ಎಫ್ ಮತ್ತು 12ಬಿ ಮಾನ್ಯತೆಯನ್ನು ಪಡೆದಿದ್ದು ನ್ಯಾಕ್ ನಿಂದ ಬಿ ಗ್ರೇಡ್ ಮಾನ್ಯತೆಯನ್ನು ಪಡೆದಿರುತ್ತದೆ. ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳ ಮಹಿಳೆಯರಿಗೆ ಸುಲಭವಾಗಿ ಉನ್ನತ ಶಿಕ್ಷಣ ದೊರೆಯುವಂತೆ ಮಾಡಲು ಮಹಿಳಾ ವಿಷಯಗಳನ್ನು ಸೇರ್ಪಡೆ ಮಾಡುವ ಮೂಲಕ ಮಹಿಳಾ ಅಸ್ಮಿತೆಯನ್ನು ಅಧ್ಯಯನಕ್ಕೆ ಒಳಪಡಿಸಿರುತ್ತದೆ. ಪ್ರಸ್ತುತ 30 ವಿಭಾಗಗಳಲ್ಲಿ 32 ಕೋರ್ಸ್ ಗಳನ್ನು ನಡೆಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಸ್ನಾತಕೋತ್ತರ ಪದವಿಗಳಿಗೆ 2411 ವಿದ್ಯಾರ್ಥಿನಿಯರು ಮತ್ತು ಪಿ.ಎಚ್.ಡಿ.ಗೆ 304 ವಿದ್ಯಾರ್ಥಿನಿಯರು ಪ್ರವೇಶ ಪಡೆದಿರುತ್ತಾರೆ. ಹಾಗೆಯೇ ಏಕಕಾಲಕ್ಕೆ ಸ್ನಾತಕೋತ್ತರ ಪದವಿಗಳ ಜೊತೆಗೆ ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್ ಗಳನ್ನು ನಡೆಸಲಾಗುತ್ತಿದ್ದು, ಒಟ್ಟು 122 ಕಾಲೇಜುಗಳು ಸಂಲಗ್ನಗೊಂಡಿರುತ್ತವೆ.

2014-15ನೇ ಸಾಲಿನಲ್ಲಿ ಮಂಡ್ಯದಲ್ಲಿ ವಿಸ್ತರಣಾ ಕೇಂದ್ರ, 2016-17ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಹಾಗೂ 2017-18ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯ ಉಡತಡಿಯಲ್ಲಿ ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರಗಳನ್ನು ಆರಂಭಿಸಲಾಗಿರುತ್ತದೆ. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಇಲ್ಲಿಯವರೆಗೆ ರೂ.6745ಲಕ್ಷಗಳ ವೆಚ್ಚದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ. 2019-20ನೇ ಆರ್ಥಿಕ ಸಾಲಿನಲ್ಲಿ ಅಭಿವೃದ್ಧಿ ಕಾರ್ಯಗಳಿಗಾಗಿ ರೂ. 100 ಲಕ್ಷಗಳನ್ನು ಒದಗಿಸಿ ಬಿಡುಗಡೆ ಮಾಡಲಾಗಿದ್ದು, ಮುಂದುವರೆದು, ಈ ಉದ್ದೇಶಕ್ಕಾಗಿ 2020-21ನೇ ಆರ್ಥಿಕ ಸಾಲಿನಲ್ಲಿ ರೂ. 50 ಲಕ್ಷಗಳನ್ನು ಮೀಸಲಿಡಲಾಗಿದೆ.

-2

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ 103 ಬೋಧಕ ಹುದ್ದೆಗಳು ಹಾಗೂ 173 ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಬೋಧಕ ಹುದ್ದೆಗಳ ವಿವರ:-

| ಕ್ರ.ಸಂ. | ಹುದ್ದೆ/ಪದನಾಮ | ಮಂಜೂರಾಗಿರುವ ಹುದ್ದೆಗಳು | ಖಾಲಿ ಇರುವ ಹುದ್ದೆಗಳು |
|---|---|---|---|
| 01 | ಪ್ರಾಧ್ಯಾಪಕರು | 17 | 09 |
| 02 | ಸಹ- ಪ್ರಾಧ್ಯಾಪಕರು | 36 | 15 |
| 03 | ಸಹಾಯಕ ಪ್ರಾಧ್ಯಾಪಕರು | 50 | 11 |
| | ಒಟ್ಟು | 103 | 35 |

ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಒಟ್ಟು- 112.

ಬೋಧಕೇತರ ಹುದ್ದೆಗಳ ವಿವರ:-

| ಕ್ರ.ಸಂ. | ಮಂಜೂರಾಗಿರುವ ಹುದ್ದೆಗಳು | ಖಾಲಿ ಇರುವ ಹುದ್ದೆಗಳು |
|---|---|---|
| 01 | 173 | 161 |

1) ಖಾಯಂ ಬೋಧಕೇತರ ಸಿಬ್ಬಂದಿಗಳು-12.
2) ತಾತ್ಕಾಲಿಕ ಸಿಬ್ಬಂದಿಗಳು-94.
3) ಬಾಹ್ಯಮೂಲ ಸಿಬ್ಬಂದಿಗಳು-29.
4) ಪಿಡಬ್ಲ್ಯೂಜಿ 34-121.

ಖಾಲಿ ಇರುವ ಬೋಧಕ ಹುದ್ದೆಗಳ ನೇಮಕಾತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಯುಜಿಸಿ ಮಾರ್ಗಸೂಚಿ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರಲ್ಲಿನ ಅವಕಾಶಗಳನ್ವಯ ನಡೆಸುವ ಕುರಿತು ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ. ಬೋಧಕೇತರ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸರ್ಕಾರದಿಂದ ಅನುಮೋದನೆ ನೀಡಲಾಗಿದ್ದು, ಮಂಜೂರಾದ ಬೋಧಕೇತರ ಹುದ್ದೆಗಳಿಗೆ ಎದುರಾಗಿ ಕಾರ್ಯನಿರ್ವಹಿಸುತ್ತಿರುವ 92 ತಾತ್ಕಾಲಿಕ ಸಿಬ್ಬಂದಿಗಳ ಪೈಕಿ 66 ತಾತ್ಕಾಲಿಕ ಸಿಬ್ಬಂದಿಗಳು ಸೇವಾ ಸಕ್ರಮಾತಿಗಾಗಿ ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿ ಪೀಠದಲ್ಲಿ ರಿಟ್ ಅರ್ಜಿ ಸಂಖ್ಯೆ: 202064-202128/2019ನ್ನು ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಅರ್ಜಿದಾರರ ಹುದ್ದೆಗಳನ್ನು ಕಾಯ್ದಿರಿಸಿ, ಉಳಿದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಂತೆ ಆದೇಶಿಸಿರುತ್ತದೆ.

ಅದರಂತೆ, ಉಳಿದ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಭರ್ತಿಮಾಡುವ ಸಂಬಂಧದ ಪ್ರಸ್ತಾವನೆಯನ್ನು ಕಡತ ಸಂಖ್ಯೆ: ಇಡಿ/28/ಎಂವಿವಿ/2019(ಇ)ರಲ್ಲಿ ಮಂಡಿಸಿ ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿ, ಪ್ರಸ್ತುತ ಇರುವ ಆರ್ಥಿಕ ನಿರ್ಬಂಧನೆಗಳ ಹಿನ್ನೆಲೆಯಲ್ಲಿ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಹಾಗೂ ಲಭ್ಯವಿರುವ ಹುದ್ದೆಗಳಿಂದಲೇ ಕಾರ್ಯನಿರ್ವಹಿಸುವಂತೆ ಆರ್ಥಿಕ ಇಲಾಖೆಯು ಅಭಿಪ್ರಾಯವನ್ನು ನೀಡಿರುತ್ತದೆ.

ಸಂಖ್ಯೆ: ಇಡಿ/12/ಎಂವಿವಿ/ 2020

(ಡಾ॥ ಅಶ್ವಥ್‌ನಾರಾಯಣ ಸಿ.ಎನ್)

ಉಪ ಮುಖ್ಯಮಂತ್ರಿಗಳು(ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)